2637 (3418) ಶ್ರೀ ಅಂಗಾರ ಎಸ್. (ಸುಳ್ಯ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾರತ ಸರ್ಕಾರ ಮತ್ತು ಶ್ರೀಲಂಕಾ ಸರ್ಕಾರ ಮಾಡಿಕೊಂಡ ಒಪ್ಪಂದದ ಪ್ರಕಾರ ಸಿಲುಕಾಡಿದ ಬಂದ ಮೇಲೆ ಕಳೆದ 30 ವರ್ಷಗಳಿಂದ ರಾಜ್ಯದಲ್ಲಿ ವಾಸಿಸುತ್ತಿರುವ ತಮಿಳು ನಿರಾಶ್ರಿತರಿಗೆ ಜಾತಿ ಪ್ರಮಾಣ ಪತ್ರ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇವರಿಗೆ ಜಾತಿ ಪ್ರಮಾಣ ಪತ್ರ ನೀಡಲು ಕೈಗೊಂಡಿರುವ ಕ್ರಮಗಳೇನು;

ಇ) ಎಷ್ಟು ಸಮಯದಲ್ಲಿ ನೀಡಲಾಗುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸರ್ಕಾರದ ಪತ್ರ ಸಂ:ಸಕಇ 184 ಎಸ್.ಎ.ಡಿ 2002: ದಿ: 1–10–2002 ರಲ್ಲಿ ನೀಡಿದ ಸೂಚನೆಯಂತೆ ನಿರಾಶ್ರಿತರುಗಳು ಭಾರತೀಯ ಪೌರತ್ವವನ್ನು ಪಡೆದಿದ್ದಲ್ಲಿ, ರಾಜ್ಯದಲ್ಲಿ ಹಾಲಿ ಚಾಲ್ತಿಯಲ್ಲಿರುವ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಪಟ್ಟಿಯಲ್ಲಿ ಅಂತಹ ಜಾತಿಗಳು ಇದ್ದಲ್ಲಿ ಅಂತಹ ನಿರಾಶ್ರಿತರಿಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗಗಳ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ.

ಇ) ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ(ನೇಮಕಾತಿ ಮುಂತಾದವುಗಳ ಮೀಸಲಾತಿ) ತಿದ್ದುಪಡಿ ನಿಯಮಗಳು 2000 ರನ್ವಯ ನಿಯಮ 3(ಎ)ನಲ್ಲಿ ನಿಗದಿಪಡಿಸಿದ ಎರಡು ತಿಂಗಳೊಳಗೆ ಜಾತಿ ಪ್ರಮಾಣ ಪತ್ರ ನೀಡಲು ಅವಕಾಶವಿದೆ.

2638 (3419) ಶ್ರೀ ಅಂಗಾರ ಎಸ್. (ಸುಳ್ಯ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಸ್.ಸಿ/ಎಸ್.ಟಿ. ಮತ್ತು ಬಿ.ಸಿ.ಎಂ. ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಎಷ್ಟು ಜನ ಅಡುಗೆ ಸಹಾಯಕರು, ಮೇಲ್ವಿಚಾರಕರು ಇರಬೇಕಾಗಿತ್ತು;

ಆ) ಹಾಲಿ ಇರುವುದು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಒಟ್ಟಾರೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ 3481 ಅಡುಗೆ ಸಹಾಯಕರು, 2714 ಮೇಲ್ವಿಚಾರಕರು ಇರಬೇಕಾಗಿತ್ತು.

ಆ) ಹಾಲಿ 3107 ಅಡುಗೆ ಸಹಾಯಕರು, 2251 ಮೇಲ್ವಿಚಾರಕರು ಕೆಲಸ ನಿರ್ವಹಿಸುತ್ತಿದ್ದಾರೆ. ಖಾಲಿ ಇರುವ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲಾಗುವುದು.

2639 (3420) ಶ್ರೀ ಅಂಗಾರ ಎಸ್. (ಸುಳ್ಯ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಎಸ್.ಸಿ/ಎಸ್.ಟಿ ಮತ್ತು ಬಿ.ಸಿ.ಎಂ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿ:ವಿದ್ಯಾರ್ಥಿನಿ ನಿಲಯಗಳಿವೆ;

ಆ) ಇದರಲ್ಲಿ ಎಷ್ಟು ಜನ ಅಡುಗೆ ಸಹಾಯಕರು, ಮೇಲ್ವಿಚಾರಕರು ಇರಬೇಕಾಗಿತ್ತು ಹಾಗೂ ಎಷ್ಟು ಜನ ಇದ್ದಾರೆ;

ಇ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಒಟ್ಟು 14 ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ/ವಿದ್ಯಾರ್ಥಿನಿ ನಿಲಯಗಳು ಇವೆ.

ಆ) ಒಟ್ಟು 28 ಜನ ಅಡುಗೆ ಸಹಾಯಕರು ಮತ್ತು 14 ಜನ ಮೇಲ್ವಿಚಾರಕರು ಇರಬೇಕಿತ್ತು. ಇದರಲ್ಲಿ 21 ಜನ ಅಡುಗೆ ಸಹಾಯಕರು, 9 ಮೇಲ್ವಿಚಾರಕರು ಇರುತ್ತಾರೆ.

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ಮೇರೆಗೆ ಕ್ರಮ ಕೈಗೊಳ್ಳಲಾಗುವುದು.

2641 (2768) ಶ್ರೀ ಭರಮಗೌಡ (ರಾಜು) ಆಲಗೌಡ ಕಾಗೆ (ಕಾಗವಾಡ):– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಗವಾಡ ಮತ ಕ್ಷೇತ್ರದಲ್ಲಿ ಎಷ್ಟು ಪಶು ಚಿಕಿತ್ಸಾ ಕೇಂದ್ರಗಳಿವೆ;

ಆ) ಇನ್ನು ಎಷ್ಟು ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲಾಗುವುದು;